## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಘವಾಪುರ ಗ್ರಾಮ ಪಂಚಾಯತಿ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/238/ಗ್ರಾಪಂಕಾ/2016, ದಿನಾಂಕ:14–09–2016.
2. ಅಪರ ನಿಬಂಧಕರು ವಿಚಾರಣೆಗಳು–9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-2/DE-399/2016/ARE-9, ದಿನಾಂಕ: 06-08-2018.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ; UPLOK-2/DE-399/2016/ARE-9, ದಿನಾಂಕ: 07-08-2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/238/ಗ್ರಾಪಂಕಾ/2016, ದಿನಾಂಕ:25–08–2018.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ಉತ್ತರ ದಿನಾಂಕ:18–09–2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಘವಾಪುರ ಗ್ರಾಮ ಪಂಚಾಯತಿ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಾಮರಾಜನಗರ ಜಿಲ್ಲೆ ರವರು ಶ್ರೀ ದೊರೆಸ್ವಾಮಿ ಬಿನ್ ತಿಮ್ಮಾಚಾರಿ, ರಾಘವಾಪುರ ಗ್ರಾಮ ಮತ್ತು ಅಂಚೆ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರು ಮಾನ್ಯ ಉಪಲೋಕಾಯುಕ್ತರಿಗೆ ನೀಡಿರುವ ದೂರಿನಲ್ಲಿ ರಾಘವಾಪುರ ಗ್ರಾಮ ಪಂಚಾಯಿತಿಯಲ್ಲಿ ವಸತಿ ಯೋಜನೆಯಡಿಯಲ್ಲಿ ಒಂದೇ ಕುಟುಂಬದ 6 ಜನ ನೀರಾವರಿ ಜಮೀನು ಹೊಂದಿದ್ದರೂ ಸಹ ಫಲಾನುಭವಿಗಳ ಹೆಸರಲ್ಲಿ ವಸತಿಗಳು ಮಂಜೂರಾಗಿದ್ದು ಬಿಲ್ ನೀಡಿರುತ್ತೀರಿ. ರಾಘವಾಪುರ ಗ್ರಾಮ ಪಂಚಾಯಿತಿಯಲ್ಲಿ ವಸತಿ ಯೋಜನೆಯಡಿಯಲ್ಲಿ 2012–13 ರಲ್ಲಿ ಶ್ರೀ ಶ್ರೇಯಸ್ ಎಂಬುವವರು ಹೊಸದಾಗಿ ಮನೆ ನಿರ್ಮಿಸಿಕೊಳ್ಳದೇ ಇದ್ದರೂ ಶಾರದಮ್ಮ ಎನ್ನುವವರಿಗೆ ಸೇರಿದ ಮನೆ ಫೋಟೊ ತೆಗಿಸಿ ಜಿಪಿಎಸ್ ವ್ಯವಸ್ಥೆಯಲ್ಲಿ ತೋರಿಸಿ ಹಣವನ್ನು ನೀಡಿರುತ್ತೀರಿ. ಈ ರೀತಿಯಲ್ಲಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪವೆಸಗಿರುತ್ತೀರಿ. ಸರ್ಕಾರಿ ನೌಕರನಾಗಿ ನಿಯಮ ಉಲ್ಲಂಘನೆ ಮಾಡಿದ್ದು, ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966ರ ನಿಯಮ (3)(1)(ii) ರಿಂದ(iii) ರನ್ವಯ ದುರ್ನಡತೆ ಎಸಗಿರುತ್ತಾರೆ."

ಮಾನ್ಯ ಉಪಲೋಕಾಯುಕ್ತ ರವರು ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು ನಿಯಮ ರನ್ವಯ "to recover a sum of Rs.75,000/- from the pension payable to the DGO" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಸದರಿ ನೋಟೀಸಿಗೆ ಅವರು ಉಲ್ಲೇಖ(5) ರಲ್ಲಿ ತಿಳಿಸಿರುವಂತೆ ಕೆಳಗಿನಂತೆ ಸಮಜಾಯಿಷಿಯನ್ನು ನೀಡಿರುತ್ತಾರೆ.

- ನಾನು ಶ್ರೇಯಸ್ ಹಾಗೂ ಮಹೇಂದ್ರ ರವರು ಪ್ರತ್ಯೇಕವಾಗಿ ಮನೆ ನಿರ್ಮಾಣ ಮಾಡಿರುವ ಹಂತಗಳ ಛಾಯ ಚಿತ್ರಗಳನ್ನು ಹಾಜರು ಪಡಿಸಿದ್ದು, ಅದು ನಿಶಾನೆ ಡಿ4 ಎಂದು ಗುರುತಿಸಲ್ಪಟ್ಟಿರುತ್ತದೆ. ಅಲ್ಲದೆ ಶ್ರೇಯಸ್ ರವರಿಗೆ ನಾನು ತಲಾ ರೂ.15,000/-ಗಳ 2 ಚೆಕ್ಕುಗಳನ್ನು ಮಾತ್ರ ನೀಡಿದ್ದು, ಸದರಿ ಹಂತದ ಕಟ್ಟಡವನ್ನು ನಿರ್ಮಾಣ ಮಾಡಿರುವುದನ್ನು ಪರಿಶೀಲಿಸಿ, ಛಾಯಚಿತ್ರಗಳನ್ನು ಪಡೆದುಕೊಂಡು, ಪಾವತಿಸಿರುತ್ತೇನೆ. ಆದ ಕಾರಣ, ಸದರಿ ಚೆಕ್ಕುಗಳ ಪಾವತಿಯಲ್ಲಿಯೂ ಸಹ ನನ್ನ ಯಾವುದೇ ಕರ್ತವ್ಯ ಲೋಪ ಆಗಿರುವುದಿಲ್ಲ ಉಳಿಕೆ ರೂ.40,000/-ಗಳನ್ನು ಶ್ರೇಯಸ್ ರವರೇ ನೇರವಾಗಿ ಸರ್ಕಾರದಿಂದ ಪಡೆದು ಕೊಂಡಿರುತ್ತಾರೆ. ಹಾಗಾಗಿ ಇದರಲ್ಲಿ ನನ್ನ ಯಾವುದೇ ಪಾತ್ರವಾಗಲಿ ಕರ್ತವ್ಯವಾಗಲಿ ಇರುವುದಿಲ್ಲ. ಶ್ರೇಯಸ್ ರವರು ಫಲಾನುಭವಿಯಾಗಿದು, ಅವರೇ ಸಂಪೂರ್ಣ ರೂ.75,000/-ಗಳ ಹಣವನ್ನು ಪಡೆದುಕೊಂಡಿದ್ದು, ಅದನ್ನು ಹಿಂತಿರುಗಿಸಬೇಕಿದ್ದಲ್ಲಿ, ಶ್ರೇಯಸ್ ರವರೇ ಪಾವತಿಸಬೇಕಾಗಿರುತ್ತದೆ. ಆದ ಕಾರಣ ನನ್ನ ವಿರುದ್ಧ ಯಾವುದೇ ಕ್ರಮವನ್ನು ಜರಿಗಿಸಬಾರದೆಂದು ಹಾಗೂ ರೂ.75,000/-ಗಳನ್ನು ಪಾವತಿಸಲು ನಾನು ಬದ್ಧಳಾಗಿರುವುದಿಲ್ಲವೆಂದು, ಆದೇಶ ಮಾಡಬೇಕೆಂದು, ಒಂದೊಮ್ಮೆ ಶ್ರೇಯಸ್ ರವರು ಪಡೆದುಕೊಂಡಿರುವ ರೂ.75,000/-ಗಳನ್ನು ಹಿಂಪಡೆಯಬೇಕಿದಲ್ಲಿ, ಶ್ರೇಯಸ್ ರವರಿಂದಲೇ ವಸೂಲಿ ಮಾಡಿಕೊಳ್ಳುವಂತೆ ಆದೇಶ ಮಾಡಬೇಕೆಂದು ಕೋರಿರುತ್ತಾರೆ.
- ಆಪಾದಿತ ನೌಕರರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧಪಟ್ಟಂತೆ ವಿಚಾರಣಾಧಿಕಾರಿಯವರು ಅವರ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿವೆ. ಆರೋಪಿತ ನೌಕರರು ನೀಡಿರುವ ಮನವಿಯಲ್ಲಿನ ನಿಯಮಾವಳಿಗಳ ಪ್ರಕಾರ ಒಪ್ಪಲು ಸಾಧ್ಯವಿಲ್ಲ.

ಸದರಿ ಪ್ರಕರಣದ ಕುರಿತು ಅಪರ ನಿಬಂಧಕರು ವಿಚಾಯಣೆಗಳು-9 ಕರ್ನಾಟಕ ಲೋಕಾಯುಕ್ತ ರವರು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರಧಿಯಲ್ಲಿ ಆಪಾದಿತ ನೌಕರರ ವಿರುದ್ಧ ಆರೋಪವು ಸಾಬೀತಾಗಿರುವುದಕ್ಕೆ ವಿವರವಾದ ವರದಿಯ ಪ್ರಮುಖ ಅಂಶಗಳು ಈ ಕೆಳಗಿನಂತೆ ಪುನರುಚ್ಚರಿಸಿದೆ:-

Considering the evidence of Pw.1, 2 and documents produced by the both sides there is no clear documents from the said of the DGO to show that the beneficiary by name Sreyas constructed the house in his site after he selected as beneficiary under the housing scheme for the year 2012-13. The document Ex.P4 GPA sheet Page No.55(5) and Ex.D4 photographs and evidence of the Pw.1 and 2 clearly reveals that the said beneficiary not at all constructed the house under the said scheme even though that the DGO passed the bill in his name. Hence, it is clear that the DGO committed misconduct and dereliction of duty and held responsible for payment made to the said beneficiaries ie., Rs.75,000/- thereby the disciplinary authority succeeded to prove the charges-2 leveled against her and the DGO held responsible for Rs.75,000/-which was caused loss to the state exchequer. In the above said facts and circumstances, the charge-1 is not

proved and charged-2 is proved against the DGO and the DGO held responsible for Rs.75,000/- which was caused loss to the state exchequer. Hence, this report is submitted to Hon'ble Upalokayukta for further action.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತ ರವರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಘವಾಪುರ ಗ್ರಾಮ ಪಂಚಾಯತಿ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರಿಗೆ "to recover a sum of Rs.75,000/- from the pension payable to the DGO" ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಘವಾಪುರ ಗ್ರಾಮ ಪಂಚಾಯತಿ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರಿಗೆ "to recover a sum of Rs.75,000/- from the pension payable to the DGO" ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/238/ಗ್ರಾಪಂಕಾ/2016,**
**ಬೆಂಗಳೂರು, ದಿನಾಂಕ:03-12-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಘವಾಪುರ ಗ್ರಾಮ ಪಂಚಾಯತಿ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರಿಗೆ "to recover a sum of Rs.75,000/- from the pension payable to the DGO" ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್) 3/12
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ.

7.ಶ್ರೀಮತಿ ರುಕ್ಮಿಣಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಘವಾಪುರ ಗ್ರಾಮ ಪಂಚಾಯತಿ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ.

8.ಗಣಕ ಕೋಶ

9.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.